Date :24.10.2025

ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**– ಮುಂದುವರಿದ ಮುಖ್ಯ ವಿಚಾರಣೆ – ಅರ್ಜಿದಾರರ ಪರ ಶ್ರೀ B.N.T. ವಕೀಲರಿಂದ –**

ನನ್ನ ಸಾಕ್ಷಿಗೆ ಬೆಂಬಲಿತವಾಗಿ, ತುಮಕೂರು–ಚಿತ್ರದುರ್ಗ–ದಾವಣಗೆರೆ ಹೊಸ ನೇರ ರೈಲ್ವೆ ಮಾರ್ಗ ಯೋಜನೆಯ ವಿಶೇಷ ಭೂಸ್ವಾಧೀನಾಧಿಕಾರಿ ದಿಃ 10.11.2023 ರಂದು ಹೊರಡಿಸಿದ ಸಾಮಾನ್ಯ ಐತೀರ್ಪಿನ ನಕಲು ದೃಢೀಕೃತ ಪ್ರತಿ ಹಾಜರುಪಡಿಸಿದ್ದು, ಅದನ್ನು ನಿಪಿ–7 ಎಂದು, ಭದ್ರಾ ಮೇಲ್ದಂಡೆ ಯೋಜನೆಯ ವಿಶೇಷ ಭೂಸ್ವಾಧೀನಾಧಿಕಾರಿ ದಿಃ 15.06.2024 ರಂದು ಹೊರಡಿಸಿದ ಸಾಮಾನ್ಯ ಐತೀರ್ಪಿನ ನಕಲು ದೃಢೀಕೃತ ಪ್ರತಿ ಹಾಗೂ ಅವಾರ್ಡ ತಃಖ್ತೆಯ ನಕಲು ದೃಢೀಕೃತ ಪ್ರತಿ ಹಾಜರುಪಡಿಸಿದ್ದು, ಅವುಗಳನ್ನು ನಿಪಿ–8 ಮತ್ತು 9 ಎಂದು, ದಿಃ 26.11.2020 ರಂದು 1 ನೇ ಎದುರುದಾರರು ನಮ್ಮಗಳ ಹೆಸರಿಗೆ ನೀಡಿದ ಅವಾರ್ಡ ನೋಟೀಸಿನ ನಕಲು ಪ್ರತಿ ಹಾಗೂ ನಮ್ಮ ಮಾಲೀಕತ್ವದ ಜಮೀನನ್ನು ಎದುರುದಾರರು ಭೂಸ್ವಾಧೀನ ಪಡಿಸಿಕೊಂಡ ಬಾಬ್ತು ನಮಗೆ ಪರಿಹಾರವನ್ನು ಚೆಕ್ ಮುಖಾಂತರ ನೀಡಿದ್ದು, ಅದನ್ನು ಬ್ಯಾಂಕಿಗೆ ಕಳುಹಿಸಿದ ಬಗ್ಗೆ ತೋರಿಸಲು ಇರುವ ಒಂದು ಪತ್ರದ ನಕಲು ದೃಢೀಕೃತ ಪ್ರತಿ ಹಾಜರುಪಡಿಸಿದ್ದು, ಅವುಗಳನ್ನು ಕ್ರಮವಾಗಿ ನಿಪಿ–10 ಮತ್ತು 11 ಎಂದು ಗುರುತಿಸಲಾಯಿತು.

**(ಈ ಹಂತದಲ್ಲಿ ಮುಂದುವರೆದ ಮುಖ್ಯ ವಿಚಾರಣೆಗಾಗಿ ವಕೀಲರು ಕಾಲಾವಕಾಶ ಕೋರುತ್ತಿದ್ದು, ಕಾಲಾವಕಾಶವನ್ನು ನೀಡಿ ಮುಂದುವರಿದ ಮುಖ್ಯವಿಚಾರಣೆ ಮುಂದೂಡಲಾಯಿತು)**

(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನದಂತೆ ಬೆರಳಚ್ಚುಪಡಿಸಿದೆ.)

ಓದಿ ಹೇಳಿ ಕೇಳಿ ಸರಿ ಇದೆ.

1 ನೇ ಅಪರ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,

ಚಿತ್ರದುರ್ಗ.